# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ:338:ಗ್ರಾಪಂಅ:2017

ಕರ್ನಾಟಕ ಸರ್ಕಾರದ ಸಚಿವಾಲಯ,
**ಬಹುಮಹಡಿ ಕಟ್ಟಡ,**
ಬೆಂಗಳೂರು, ದಿನಾಂಕ:28-11-2017.

## ಸುತ್ತೋಲೆ

ರಾಜ್ಯದ ಹಲವೆಡೆಗಳಲ್ಲಿ ನೀರಿನ ಅಭಾವ, ಅಸಮರ್ಪಕ ಪೂರೈಕೆ, ಆಗಾಗ ಬೀಳುತ್ತಿರುವ ಮಳೆ ಹಾಗೂ ತಾಪಮಾನದ ಏರಿಳಿತದಿಂದಾಗಿ ಡೆಂಗೀ ಪ್ರಕರಣಗಳು ಹೆಚ್ಚುತ್ತಿದ್ದು, ಇತರ ಇಲಾಖೆಗಳ ಸಹಭಾಗಿತ್ವದೊಂದಿಗೆ ನಿರ್ದಿಷ್ಟ ಕ್ರಿಯಾಯೋಜನೆಯಂತೆ ಡೆಂಗೀ ನಿಯಂತ್ರಣಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ.

1. ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಅಭಾವ ಹಾಗು ಅಸಮರ್ಪಕ ನೀರು ಪೂರೈಕೆಯಿಂದ ಸಾರ್ವಜನಿಕರು ಹಲವು ನೀರಿನ ಶೇಖರಣೆಗಳನ್ನು ಸಂಗ್ರಹಿಸಿಡುವುದು ಅನಿವಾರ್ಯವಾಗಿದ್ದು, ನಿರ್ದಿಷ್ಟ ವೇಳಾಪಟ್ಟಿಯಂತೆ ನಿಯಮಿತವಾಗಿ ನೀರು ಪೂರೈಕೆ ಮಾಡುವುದರಿಂದ ಅವೈಜ್ಞಾನಿಕ ನೀರು ಸಂಗ್ರಹಣಾ ವಿಧಾನ ಹಾಗೂ ಈಡಿಸ್ ಸೊಳ್ಳೆಯನ್ನು ತಡೆಯಬಹುದಾದ್ದರಿಂದ ಸಮರ್ಪಕ ನೀರು ಪೂರೈಕೆಗೆ ಕ್ರಮ ಕೈಗೊಳ್ಳುವುದು.

2. ಸಾರ್ವಜನಿಕ ನಲ್ಲಿಗಳು ಹಾಗೂ ಬೋರ್ ವೆಲ್‌ಗಳ ಸುತ್ತ ನೀರು ನಿಲ್ಲದಂತೆ ಕ್ರಮ ಕೈಗೊಳ್ಳುವುದು. ನೀರು ಪೂರೈಕೆಯ ಪೈಪ್ ಲೈನ್‌ನಲ್ಲಿ ಸೋರಿಕೆ ಕುರಿತು ಆರೋಗ್ಯ ಸಿಬ್ಬಂದಿ/ಆಶಾ ಸಂಬಂಧಪಟ್ಟ ಗ್ರಾಮ ಪಂಚಾಯತ್ ಗಮನಕ್ಕೆ ತಂದೊಡನೆ ದುರಸ್ಥಿ ಕಾರ್ಯವನ್ನು ಶೀಘ್ರವೇ ಮಾಡುವುದು.

3. ಗ್ರಾಮಗಳಲ್ಲಿನ ಮನೆಬಳಕೆಯ ಶೌಚಾಲಯಗಳು ಹಾಗೂ ಸಮುದಾಯದ ಶೌಚಾಲಯಗಳ ಪಕ್ಕದಲ್ಲಿರುವ ನೀರಿನ ತೊಟ್ಟಿಗಳಿಗೆ ಸೊಳ್ಳೆ ನುಸುಳದಂತೆ ಮುಚ್ಚಳಗಳನ್ನು ಒದಗಿಸುವುದು ಹಾಗು ವಾರಕ್ಕೊಮ್ಮೆ ಸ್ವಚ್ಛಗೊಳಿಸಲು ಅನುಕೂಲವಾಗುವಂತೆ ಮುಂಜಾಗ್ರತಾ outlet ನ ವ್ಯವಸ್ಥೆ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

4. ಗ್ರಾಮಗಳಲ್ಲಿ ಜಾನುವಾರುಗಳಿಗೆ ನೀರು ಕುಡಿಯಲು ಕಟ್ಟಿಸಿರುವ ತೊಟ್ಟಿಗಳಲ್ಲಿ ಈಡಿಸ್ ಸೊಳ್ಳೆಗಳು ಬೆಳೆಯುವುದರಿಂದ, ಈ ತೊಟ್ಟಿಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಲು ಗ್ರಾಮ ಪಂಚಾಯತ್‌ಗಳು ಕ್ರಮ ಕೈಗೊಳ್ಳುವುದು.

5. ಗ್ರಾಮಾಂತರ ಪ್ರದೇಶಗಳಲ್ಲಿನ ಮನೆಗಳ ಹಾಗೂ ಸುತ್ತಮುತ್ತಲ ಪರಿಸರದಲ್ಲಿ ಸೊಳ್ಳೆ ಉತ್ಪತ್ತಿಯಾಗದಂತೆ ತಡೆಗಟ್ಟುವ ಮತ್ತು ನಿರ್ಮೂಲನ ಕ್ರಮಗಳನ್ನು ಕೈಗೊಳ್ಳುವುದು.

6. ಸೂಕ್ತ ಮಾಹಿತಿ ಶಿಕ್ಷಣ ಮತ್ತು ಸಂಪರ್ಕ ಮಾಧ್ಯಮಗಳಿಂದ ಸಮುದಾಯದಲ್ಲಿ ಅರಿವು ಮೂಡಿಸುವುದು. ಇದಕ್ಕಾಗಿ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯಿತಿಗಳ ಸದಸ್ಯರಿಗೆ ಈ ರೋಗದ ಬಗ್ಗೆ ಹಾಗೂ ಈ ರೋಗ ಬಾರದಂತೆ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಮಾಹಿತಿ ಶಿಬಿರಗಳನ್ನು ಏರ್ಪಡಿಸುವುದು.

7. ಸೊಳ್ಳೆ ಕಚ್ಚುವಿಕೆಯಿಂದ ಪಾರಾಗಲು(ಈ ರೋಗ ಬಾರದಂತೆ), ಮಲಗುವಾಗ ಸೊಳ್ಳೆ ಪರದೆಯನ್ನು ಉಪಯೋಗಿಸುವಂತೆ ಸಮುದಾಯವನ್ನು ಪ್ರೇರೇಪಿಸುವುದು.

8. ಡೆಂಗೀ ಹಾಗೂ ಇತರೇ ಸಾಂಕ್ರಾಮಿಕ ರೋಗಗಳು ಉಲ್ಬಣವಾಗುವ ಸಾಧ್ಯತೆಯಿದ್ದು, ಇವುಗಳನ್ನು ತಡೆಗಟ್ಟಲು ಸಮಯೋಚಿತ ಮತ್ತು ಸೂಕ್ತ ಮುಂಜಾಗ್ರತಾ ಚಟುವಟಿಕೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವುದು.

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು. **(ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಿಗೆ ಈ ಸುತ್ತೋಲೆಯ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ.)**
3) ಗಣಕ ಕೋಶ ಶಾಖೆಗೆ.
4) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

**ಪ್ರತಿ:**

ಸರ್ಕಾರದ ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಆರೋಗ್ಯ 1&2).